# Akashvani : Bangalore
# National Bulletin In Kannada
# 19.09.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.09.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ಕಲಬುರಗಿ ಸಚಿವ ಸಂಪುಟ ಸಭೆ; ಕಲ್ಯಾಣ ಕರ್ನಾಟಕ ಭಾಗದ ೧೧ ಸಾವಿರದ ೭೭೦ ಕೋಟಿ ರೂಪಾಯಿ ಮೊತ್ತದ ಯೋಜನೆಗಳಿಗೆ ಅನುಮೋದನೆ

೨. ೪೦ ಸಾವಿರ ಸಾಮಾನ್ಯ ರೈಲು ಬೋಗಿಗಳನ್ನು 'ವಂದೇ ಭಾರತ್' ಮಾನದಂಡಕ್ಕೆ ತ್ವರಿತವಾಗಿ ಪರಿವರ್ತಿಸಬೇಕು- ಸಚಿವೆ ನಿರ್ಮಲಾ ಸೀತಾರಾಮನ್

೩. ಜಮ್ಮು-ಕಾಶ್ಮೀರದ ೨೪ ವಿಧಾನಸಭಾ ಕ್ಷೇತ್ರಗಳಿಗೆ ಮೊದಲ ಹಂತದ ಮತದಾನ ಪ್ರಾರಂಭ

೪. ಐದನೇ ಬಾರಿಗೆ ಏಷ್ಯನ್ ಚಾಂಪಿಯನ್ ಹಾಕಿ ಟ್ರೋಫಿ ಮುಡಿಗೇರಿಸಿಕೊಂಡ ಭಾರತ; ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ

**<><*<><>*><>**

ಕರ್ನಾಟಕದ ಕಲಬುರಗಿಯಲ್ಲಿ ನಿನ್ನೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ೧೧ ಸಾವಿರದ ೭೭೦ ಕೋಟಿ ರೂಪಾಯಿ ಮೊತ್ತದ ೪೬ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಸಭೆಯ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬೀದರ್ ಮತ್ತು ರಾಯಚೂರು ಪಟ್ಟಣಗಳನ್ನು ನಗರಪಾಲಿಕೆಗಳಾಗಿ ಪರಿವರ್ತಿಸುವ ಹಾಗೂ ಬೀದರ್, ಕಲಬುರಗಿಯಲ್ಲಿನ ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸುವ ೭ ಸಾವಿರದ ೨೦೦ ಕೋಟಿ ರೂಪಾಯಿ ಮೊತ್ತದ ಯೋಜನೆಗೆ ಅನುಮತಿ ನೀಡಲಾಗಿದೆ ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ರಾಜ್ಯ ಸರ್ಕಾರ ೫೦೦೦ ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ. ಕೇಂದ್ರ ಸರ್ಕಾರ ಈ ಭಾಗಕ್ಕೆ ಈವರೆಗೆ ಅನುದಾನ ನೀಡಿಲ್ಲ. ಆದ್ದರಿಂದ ಕೇಂದ್ರವೂ ಕೂಡ ಈ ಭಾಗದ ಅಭಿವೃದ್ಧಿಗೆ ೫೦೦೦ ಕೋಟಿ ರೂಪಾಯಿ ನೀಡುವಂತೆ ಮನವಿ ಮಾಡಲು ನಿರ್ಣಯ ಕೈಗೊಳ್ಳಲಾಯಿತು ಎಂದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿಯಿರುವ ೧೭ ಸಾವಿರದ ೪೮೯ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು. ಕಲ್ಯಾಣ ಕರ್ನಾಟಕ ಭಾಗದಲ್ಲಿ ೪೫ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಹಾಗೂ ೩೧ ಸಮುದಾಯ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದರು.

**<><*<><>*><>**

ಕೇಂದ್ರ ಹಣಕಾಸು ಮತ್ತು ಸಾಂಸ್ಥಿಕ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿ ನಿನ್ನೆ ರೈಲ್ವೆ ಸಚಿವಾಲಯದ ಬಜೆಟ್ ಬಂಡವಾಳ ವೆಚ್ಚದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪ್ರಸಕ್ತ ಹಣಕಾಸು ವರ್ಷದ ಬಂಡವಾಳ ವೆಚ್ಚದ ಯೋಜನೆಗಳು ಮತ್ತು ಪ್ರಗತಿಯ ಕುರಿತು ರೈಲ್ವೆ ಅಧಿಕಾರಿಗಳು ಕೇಂದ್ರ ಹಣಕಾಸು ಸಚಿವರಿಗೆ ಮಾಹಿತಿ ನೀಡಿದರು. ಅಸ್ತಿತ್ವದಲ್ಲಿರುವ ರೈಲು ಹಳಿಗಳ ದ್ವಿಗುಣಗೊಳಿಸುವಿಕೆ ಮತ್ತು ವಿದ್ಯುದ್ದೀಕರಣ ಮತ್ತು

ದೇಶಾದ್ಯಂತ ಹೊಸ ರೈಲು ಮಾರ್ಗಗಳನ್ನು ನಿರ್ಮಿಸುವುದು ಸೇರಿದಂತೆ ಸಾಮರ್ಥ್ಯ ವೃದ್ಧಿ, ಸುರಕ್ಷತೆ ಮತ್ತು ಪ್ರಯಾಣಿಕರ ಅನುಕೂಲಕ್ಕಾಗಿ ಗಮನಹರಿಸುವಂತೆ ಸಚಿವೆ ಸೀತಾರಾಮನ್ ರೈಲ್ವೆ ಸಚಿವಾಲಯದ ಅಧಿಕಾರಿಗಳಿಗೆ ಸೂಚಿಸಿದರು. ರೈಲು ಸಂಚಾರಕ್ಕೆ ಸಂಬಂಧಿಸಿದ ಸರಕು ಸಾಗಾಣೆ ದಕ್ಷತೆ ಮತ್ತು ಸಾಗಾಣೆ ವಲಯದ ವೆಚ್ಚದಲ್ಲಿ ಕಡಿತಗೊಳಿಸುವ ಸಂಬಂಧ ಪ್ರಮುಖ ಕ್ರಮವಾಗಿ ೨೦೨೪-೨೫ ರ ಮಧ್ಯಂತರ ಬಜೆಟ್ ನಲ್ಲಿ ಬಹು-ಮಾದರಿ ಸಂಪರ್ಕವನ್ನು ಸಕ್ರಿಯಗೊಳಿಸಲು ಪ್ರಧಾನಮಂತ್ರಿ ಗತಿ ಶಕ್ತಿ ಯೋಜನೆಯಡಿ ಇಂಧನ, ಖನಿಜ ಮತ್ತು ಸಿಮೆಂಟ್ ಕಾರಿಡಾರ್, ಬಂದರು ಸಂಪರ್ಕ ಕಾರಿಡಾರ್, ಹೆಚ್ಚಿನ ಸಂಚಾರ ದಟ್ಟಣೆಯ ಮೂರು ಆರ್ಥಿಕ ಕಾರಿಡಾರ್ ಗಳ ಅಡಿಯಲ್ಲಿ ೪೩೪ ರೈಲ್ವೆ ಯೋಜನೆಗಳನ್ನು ಗುರುತಿಸಲಾಗಿದೆ, ಒಟ್ಟು ೪೦,೯೦೦ ಕಿಲೋಮೀಟರ್ ಉದ್ದ ಮತ್ತು ಒಟ್ಟು ೧೧ ಲಕ್ಷದ ೧೬ ಸಾವಿರ ಕೋಟಿ ರೂಪಾಯಿ ಹೂಡಿಕೆ ಯೋಜನೆ ಇದಾಗಿದೆ  ಎಂದು ರೈಲ್ವೆ ಸಚಿವಾಲಯದ ಅಧಿಕಾರಿಗಳು ಸಚಿವರಿಗೆ ತಿಳಿಸಿದರು. ೨೦೨೪-೨೫ರ ಮಧ್ಯಂತರ ಬಜೆಟ್‌ನಲ್ಲಿ ಘೋಷಿಸಿದಂತೆ ೪೦ ಸಾವಿರ ಸಾಮಾನ್ಯ ರೈಲು ಬೋಗಿಗಳನ್ನು ವಂದೇ ಭಾರತ್ ಮಾನದಂಡಕ್ಕೆ ಪರಿವರ್ತಿಸುವ ಕೆಲಸವನ್ನು ರೈಲ್ವೆ ಸಚಿವಾಲಯವು ತ್ವರಿತಗೊಳಿಸಬೇಕು.  ಮೋದಿ ಸರ್ಕಾರದ ಮೊದಲ ೧೦೦ ದಿನಗಳಲ್ಲಿ ಸಾಧಿಸಿದ ವೇಗವನ್ನು ಮುಂದುವರಿಸುವಂತೆ ರೈಲ್ವೆ ಸಚಿವಾಲಯದ ಅಧಿಕಾರಿಗಳಿಗೆ ಸಚಿವೆ ನಿರ್ಮಲಾ ಸೀತಾರಾಮನ್ ಸೂಚಿಸಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಒಡಿಶಾ ಸರ್ಕಾರದ ಪ್ರಮುಖ ಮಹಿಳಾ ಕೇಂದ್ರಿತ ಸುಭದ್ರಾ ಯೋಜನೆ, ಇತರ ರೈಲ್ವೆ ಮತ್ತು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಚಾಲನೆ ನೀಡಿದರು. ಪ್ರಧಾನಿ ನರೇಂದ್ರ ಮೋದಿ ಅವರ ಹುಟ್ಟು ಹಬ್ಬದ ಹಿನ್ನೆಲೆಯಲ್ಲಿ ಬಿಜು ಪಟ್ನಾಯಕ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬುಡಕಟ್ಟು ಜನಾಂಗದ ಜಾನಪದ ನೃತ್ಯಗಳು ಮತ್ತು ಡ್ರಮ್‌ಬಾಟ್‌ಗಳೊಂದಿಗೆ ಸಾಂಪ್ರದಾಯಿಕ ಸ್ವಾಗತ ಸ್ವೀಕರಿಸಿದರು. ಅಲ್ಲಿ ಸಾವಿರಾರು ಬೆಂಬಲಿಗರು ಅವರ ಜನ್ಮದಿನದಂದು ಅವರಿಗೆ ಶುಭಾಶಯ ಕೋರಿದರು. ಸುಭದ್ರಾ ಯೋಜನೆಯು ಮಹಿಳಾ ಸಬಲೀಕರಣವನ್ನು ಹೆಚ್ಚಿಸುತ್ತದೆ ಮತ್ತು ನಮ್ಮ 'ನಾರಿ ಶಕ್ತಿ'ಗೆ ಆರ್ಥಿಕ ಸ್ವಾತಂತ್ರ್ಯವನ್ನು ಖಚಿತಪಡಿಸುತ್ತದೆ ಎಂದು ಸಾಮಾಜಿಕ ಮಾಧ್ಯಮ ವೇದಿಕೆ 'ಎಕ್ಸ್' ನಲ್ಲಿ, ನರೇಂದ್ರ ಮೋದಿ ಅವರು ಹೇಳಿದ್ದಾರೆ. ಒಟ್ಟು ೨೧ ರಿಂದ ೬೦ ವರ್ಷ ವಯಸ್ಸಿನ ಎಲ್ಲಾ ಅರ್ಹ ಮಹಿಳೆಯರು ಐದು ವರ್ಷಗಳಲ್ಲಿ ೫೦ ಸಾವಿರ ರೂಪಾಯಿ ಮೊತ್ತವನ್ನು ಪಡೆಯಲಿದ್ದಾರೆ. ಈ ಉಪಕ್ರಮವು ಒಂದು ಕೋಟಿಗೂ ಹೆಚ್ಚು ಮಹಿಳೆಯರನ್ನು ಒಳಗೊಳ್ಳುವ ನಿರೀಕ್ಷೆಯಿದೆ ಎಂದಿದ್ದಾರೆ.  ಪ್ರಧಾನಿ ಮೋದಿ ಅವರು ತಮ್ಮ ಭೇಟಿಯ ವೇಳೆ ೨೫ ಲಕ್ಷ ೧೧ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ೧ ಸಾವಿರದ ೨೫೦ ಕೋಟಿ ರೂಪಾಯಿಗಳ ನಿಧಿ ವರ್ಗಾವಣೆಗೆ ಚಾಲನೆ ನೀಡಿದರು.

**<><*<><>*><>**

ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಇಂದು ಗಾಂಧಿನಗರದಲ್ಲಿ ರೀ ಇನ್ವೆಸ್ಟ್ ಸಭೆಯ ನಾಲ್ಕನೇ ಆವೃತ್ತಿಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.  ಕೇಂದ್ರ ನವ ಮತ್ತು ನವೀಕರಣ ಸಚಿವ ಪ್ರಹ್ಲಾದ್ ಜೋಶಿ ನಿನ್ನೆ ಮಾತನಾಡಿ ರಾಜ್ಯ ಸರ್ಕಾರಗಳು ಮತ್ತು ಖಾಸಗಿ ತಯಾರಕರು ಸೇರಿದಂತೆ ವಿವಿಧ ಪಾಲುದಾರರು ಮುಂದಿನ ೬ ವರ್ಷಗಳಲ್ಲಿ ನವೀಕರಿಸಬಹುದಾದ

ಇಂಧನ ಯೋಜನೆಗಳಲ್ಲಿ ಒಟ್ಟು ೩೨ ಲಕ್ಷದ ೪೫ ಸಾವಿರ ಕೋಟಿ ರೂಪಾಯಿಗಳ ಹೂಡಿಕೆ ಮಾಡಿದ್ದಾರೆ ಎಂದು ತಿಳಿಸಿದರು.

<><*<><>*><>

ಕಣಿವೆ ರಾಜ್ಯ ಜಮ್ಮು-ಕಾಶ್ಮೀರದಲ್ಲಿ ವಿಧಾನಸಭಾ ಚುನಾವಣೆ ಪ್ರಕ್ರಿಯೆ ತೀವ್ರಗೊಂಡಿದೆ. ಮೊದಲ ಹಂತದಲ್ಲಿ ೨೪ ವಿಧಾನಸಭಾ ಕ್ಷೇತ್ರಗಳಿಗೆ ಇಂದು ಮತದಾನ ನಡೆಯುತ್ತಿದ್ದು, ವ್ಯಾಪಕ ಬಿಗಿಭದ್ರತೆ ನಡುವೆ ಮತದಾರರು ಮತ ಚಲಾಯಿಸುತ್ತಿದ್ದಾರೆ. ೨೧೯ ಅಭ್ಯರ್ಥಿಗಳ ಭವಿಷ್ಯವನ್ನು ೨೩ ಲಕ್ಷ ಮತದಾರರು ನಿರ್ಣಯಿಸಲಿದ್ದಾರೆ. ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನದ ಮಾನ್ಯತೆ ರದ್ದುಗೊಳಿಸಿದ ನಂತರ ನಡೆಯುತ್ತಿರುವ ಮೊದಲ ವಿಧಾನಸಭಾ ಚುನಾವಣೆ ಇದಾಗಿದೆ.

<><*<><>*><>

ಸತತ ಐದನೇ ಬಾರಿಗೆ ಏಷ್ಯನ್ ಚಾಂಪಿಯನ್ ಹಾಕಿ ಟ್ರೋಫಿಯನ್ನು ಭಾರತ ತನ್ನ ಮುಡಿಗೇರಿಸಿಕೊಂಡಿದೆ. ಚೀನಾದ ಹುಲುನ್‌ಬುಯರ್‌ನಲ್ಲಿ ನಿನ್ನೆ ನಡೆದ ಫೈನಲ್ ಪಂದ್ಯದಲ್ಲಿ ಚೀನಾ ವಿರುದ್ಧ ೧-೦ ಗೋಲುಗಳ ಅಂತರದಿಂದ ಭಾರತ ಭರ್ಜರಿ ಜಯಗಳಿಸಿದೆ. ಕಠಿಣ ಸೆಣಸಾಟದ ಪಂದ್ಯದ ೫೧ನೇ ನಿಮಿಷದಲ್ಲಿ ಭಾರತದ ಪರ ಜುಗ್‌ರಾಜ್ ಸಿಂಗ್ ಗೋಲು ಗಳಿಸುವ ಮೂಲಕ ಭಾರತಕ್ಕೆ ಗೆಲುವು ತಂದುಕೊಟ್ಟರು. ಭಾರತ ತಂಡದ ಗೆಲುವಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ತಂಡದ ಆಟಗಾರರು ಸಮರ್ಪಣಾ ಭಾವದಿಂದ ಹಾಗೂ ಸಂಘಟಿತ ಪ್ರಯತ್ನದಿಂದ ಭಾರತಕ್ಕೆ ಗೆಲುವು ತಂದುಕೊಟ್ಟ ತಂಡದ ಬಗ್ಗೆ ದೇಶ ಹೆಮ್ಮೆಪಡುತ್ತದೆ ಎಂದು ಹೇಳಿದ್ದಾರೆ.

<><*<><>*><>

ತುಂಗಭದ್ರಾ ಜಲಾಶಯಕ್ಕೆ ಈ ತಿಂಗಳ ೨೨ ರಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಸಚಿವ ಸಂಪುಟದ ಸಹೋದ್ಯೋಗಿಗಳೊಂದಿಗೆ ಬಾಗಿನ ಅರ್ಪಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ನೆರೆಯ ಆಂಧ್ರಪ್ರದೇಶ ಕಡಪಾ, ಕರ್ನೂಲು ಜಿಲ್ಲೆಗಳ ರೈತರ ಜೀವನಾಡಿಯಾಗಿರುವ ತುಂಗಭದ್ರಾ ನದಿಗೆ ಹೊಸಪೇಟೆ-ಕೊಪ್ಪಳ ಮಧ್ಯೆ ಇರುವ ಜಲಾಶಯದ ೧೯ ನೇ ಕ್ರೆಸ್ಟ್ ಗೇಟ್ ಮುರಿದ ಕಾರಣ ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಹರಿದುಹೋಗುತ್ತಿತ್ತು. ಕೇವಲ ಐದು ದಿನಗಳಲ್ಲಿ ಗೇಟು ಅಳವಡಿಸಿ ನೀರು ಪೋಲಾಗುವುದನ್ನು ನಿಯಂತ್ರಿಸಿದ ಪರಿಣಾಮವಾಗಿ ಈಗ ಜಲಾಶಯ ಪುನಃ ಭರ್ತಿಯಾಗಿದೆ. ಕ್ರೆಸ್ಟ್ ಗೇಟ್ ದುರಸ್ತಿಗೆ ಶ್ರಮಿಸಿದ ೧೦೮ ಜನರನ್ನು ಅಂದು ಗೌರವಿಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

<><*<><>*><>

’ಸ್ವಚ್ಛ ಭಾರತ್ ಅಭಿಯಾನ’ದಡಿ ೧೦ ನೇ ವಾರ್ಷಿಕೋತ್ಸವದ ಅಂಗವಾಗಿ ಬೆಂಗಳೂರು ವಿಭಾಗದಲ್ಲಿ ’ಸ್ವಚ್ಛತಾ ಹಿ ಸೇವಾ’ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಈ ಅಭಿಯಾನವನ್ನು ನಿನ್ನೆಯಿಂದ ಅಕ್ಟೋಬರ್ ೨ ರವರಿಗೆ ಆಚರಿಸಲಾಗುತ್ತಿದ್ದು, ಇದರಲ್ಲಿ ಬೆಂಗಳೂರು ವಿಭಾಗದಲ್ಲಿ ವಿವಿಧ

ಸ್ವಚ್ಛತಾ ಅಭಿಯಾನಗಳನ್ನು ಕೈಗೊಳ್ಳಲಾಗುತ್ತಿದೆ. 'ಸ್ವಭಾವ ಸ್ವಚ್ಛತೆ- ಸಂಸ್ಕಾರ ಸ್ವಚ್ಛತೆ' ಇದು ಸ್ವಚ್ಛತಾ ಹೀ ಸೇವಾ ಎಂಬುದು ಅಭಿಯಾನದ ಧ್ಯೇಯ ವಾಕ್ಯವಾಗಿದ್ದು, ಅಕ್ಟೋಬರ್ ೨ರಂದು ಸ್ವಚ್ಛ ಭಾರತ್ ದಿವಸ್ ಆಚರಿಸಲಾಗುವುದು. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣದಲ್ಲಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಯೋಗೇಶ್ ಮೋಹನ್ ಅವರು ನಿಲ್ದಾಣದ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು ಮತ್ತು ಪ್ರಯಾಣಿಕರಿಗೆ ಪ್ರತಿಜ್ಞೆ ಬೋಧಿಸುವ ಮೂಲಕ ಸ್ವಚ್ಛತಾ ಹೀ ಸೇವಾ ಅಭಿಯಾನಕ್ಕೆ ಚಾಲನೆ ನೀಡಿದರು. ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಪರೀಕ್ಷಿತ್ ಮೋಹನ್‌ಪುರಿ ಯಾ, ಹಿರಿಯ ವಿಭಾಗೀಯ ಹೌಸ್ ಕೀಪಿಂಗ್ ವ್ಯವಸ್ಥಾಪಕರಾದ ಪ್ರಿಯಾ ಮತ್ತು ಇತರ ಅಧಿಕಾರಿಗಳು ಹಾಜರಿದ್ದರು. ಬೆಂಗಳೂರು ವಿಭಾಗದಿಂದ ಕಾಲೇಜು ವಿದ್ಯಾರ್ಥಿಗಳಿಗೆ ಎಸ್‌ಎಂವಿಟಿ ಬೆಂಗಳೂರು ನಿಲ್ದಾಣದಲ್ಲಿ ಗೋಡೆ ಮೇಲೆ ಕಲಾರಚನೆಗಳನ್ನು ಬಿಡಿಸುವ ಸ್ಪರ್ಧೆಯನ್ನು ಕಾಲೇಜು ವಿದ್ಯಾರ್ಥಿಗಳಿಗಾಗಿ ಈ ತಿಂಗಳ ೨೯ ರಂದು ಆಯೋಜಿಸಲಾಗಿದೆ.

<><*<><>*><>

ಶ್ರೀಲಂಕಾದಲ್ಲಿ ಅಧ್ಯಕ್ಷೀಯ ಚುನಾವಣೆಯ ಪ್ರಚಾರ ಇಂದು ಮಧ್ಯರಾತ್ರಿ ಕೊನೆಗೊಳ್ಳಲಿದೆ. ದೇಶದ ಚುನಾವಣಾ ಆಯೋಗವು, ನ್ಯಾಯಸಮ್ಮತ ಮತ್ತು ಮುಕ್ತ ಚುನಾವಣಾ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ಕಟ್ಟುನಿಟ್ಟಿನ ನಿಯಮಾವಳಿಗಳು ಜಾರಿಗೊಳಿಸಿದೆ. ದ್ವೀಪ ರಾಷ್ಟ್ರದಾದ್ಯಂತ ೧೩ ಸಾವಿರದ ೪೦೦ ಕ್ಕೂ ಹೆಚ್ಚು ಮತಗಟ್ಟೆಗಳಲ್ಲಿ ಮತದಾನಕ್ಕೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ನಮ್ಮ ಕೊಲಂಬೊ ಬಾತ್ಮೀದಾರರು ತಿಳಿಸಿದ್ದಾರೆ.

<><*<><>*><>

ಹರಿಯಾಣ ವಿಧಾನಸಭಾ ಚುನಾವಣೆಗೆ ನಾಮಪತ್ರ ಹಿಂಪಡೆಯುವ ಪ್ರಕ್ರಿಯೆ ಪೂರ್ಣಗೊಂಡಿದ್ದು, ಒಟ್ಟು ೧ ಸಾವಿರದ ೩೧ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ೧೦೧ ಮಹಿಳಾ ಅಭ್ಯರ್ಥಿಗಳು ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ ಎಂದು ಹರಿಯಾಣ ಮುಖ್ಯ ಚುನಾವಣಾಧಿಕಾರಿ ಪಂಕಜ್ ಅಗರ್ವಾಲ್ ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಒಂದೇ ಹಂತದ ಚುನಾವಣೆಗೆ ಮುಂದಿನ ತಿಂಗಳು ೫ ರಂದು ಮತದಾನ ನಡೆಯಲಿದೆ. ಏತನ್ಮಧ್ಯೆ, ವಿವಿಧ ರಾಜಕೀಯ ಪಕ್ಷಗಳ ನಾಯಕರು ಚುನಾವಣಾ ಪ್ರಚಾರ ಸಭೆಗಳನ್ನು ತೀವ್ರಗೊಳಿಸಿದ್ದಾರೆ. ಬಿಜೆಪಿಯ ಹಿರಿಯ ನಾಯಕ ಮತ್ತು ಗೃಹ ಸಚಿವ ಅಮಿತ್ ಶಾ ನಿನ್ನೆ ಭಿವಾನಿ ಮತ್ತು ಫರಿದಾಬಾದ್‌ನಲ್ಲಿ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಭಿವಾನಿಯಲ್ಲಿ ಅವರು ಕಾಂಗ್ರೆಸ್ ಪಕ್ಷವು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಮೀಸಲಾತಿ ವಿರುದ್ಧವಾಗಿದೆ ಎಂದು ಟೀಕಿಸಿದರು.

<><*<><>*><>

ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಅವರು ಲೆಬನಾನ್‌ನಲ್ಲಿ ಮಾರಣಾಂತಿಕ ಪೇಜರ್ ಸ್ಫೋಟಗಳ ನಂತರ ಟೆಲ್ ಅವಿವ್‌ನ ಹಕಿರಿಯಾ ಮಿಲಿಟರಿ ನೆಲೆಯಲ್ಲಿ ಭದ್ರತಾ ಮೌಲ್ಯಮಾಪನ ಸಭೆ ನಡೆಸಿದರು. ಈ ಸ್ಫೋಟಗಳ ಹಿಂದಿನ ಕಾರಣಗಳನ್ನು ಗುರುತಿಸಲು ಭದ್ರತೆ ಮತ್ತು ವೈಜ್ಞಾನಿಕ ತನಿಖೆಗಳನ್ನು ನಡೆಸುತ್ತಿದೆ ಎಂದು ಹೆಜ್ಬೊಲ್ಲಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಹಿಜ್ಬೊಲ್ಲಾ ಗುಂಪು ಈ ದಾಳಿಗೆ ಇಸ್ರೇಲ್ ಅನ್ನು ದೂಷಿಸಿದೆ ಮತ್ತು ಪ್ರತೀಕಾರ ತೀರಿಸಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಿದೆ. ಆದರೆ, ಘಟನೆಗಳ ಹೊಣೆಯನ್ನು ಇಸ್ರೇಲ್ ಹೊತ್ತುಕೊಂಡಿಲ್ಲ ಎಂದು ತಿಳಿಸಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**